**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ. ದಂಡಾಧಿಕಾರಿಗಳ ನ್ಯಾಯಾಲಯ, ಆನೇಕಲ್.**

| | |
|---|---|
| **ಸಿ.ಸಿ. ನಂ :-** | 805/2018 |
| **ಸಿ.ಡಬ್ಲ್ಯೂ : -9** | **ಪಿ.ಡಬ್ಲ್ಯೂ -8** |
| **ದಿನಾಂಕ :-** | **17.04.2025** |

| | |
|---|---|
| ಹೆಸರು | ಬಿ ಮಾದಯ್ಯ |
| ತಂದೆ/ತಾಯಿ/ಗಂಡನ ಹೆಸರು | ಲೇ ತಿಮ್ಮಪ್ಪ |
| ವಯಸ್ಸು | 64 ವರ್ಷ |
| ಉದ್ಯೋಗ | ನಿವೃತ್ತ ಮುಖ್ಯ ಪೇದೆ |
| ವಾಸ | ನೆಲಮಂಗಲ |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರಾಜ್ಞ ಸ. ಸ. ಅ ರವರಿಂದ**

2017 ನವೆಂಬರ್ ರಿಂದ ಅಕ್ಟೋಬರ್ 2018 ವರೆಗೆ ನಾನು ಆನೇಕಲ್ ನಲ್ಲಿ ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿನಾಂಕ 10.01.2018 ರಾತ್ರಿ 09.00 ಗಂಟೆಗೆ ನಾನು ಚಾಸಾ 1 ರವರಿಂದ ದೂರು ಸ್ವೀಕರಿಸಿ ಪ್ರಕರಣ ದಾಖಲಿಸಿಕೊಂಡು ಪ್ರ ವ ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಮರುದಿನ ಬೆಳಗ್ಗೆ 09.00 ಕ್ಕೆ ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾಸಾ 1 ರವರು ಸ್ಥಳ ತೋರಿಸಿದಂತೆ ಚಾಸಾ 6 ಮತ್ತು 7 ರವರ ಸಮಕ್ಷಮ ಪಂಚನಾಮೆ ಜರುಗಿಸಿರುತ್ತೇನೆ. ಆಗ ಚಾಸಾ 1 ರವರು ಹಾಜರುಪಡಿಸಿದ ಕೃತ್ಯಕ್ಕೆ ಬಳಸಿದ ನೀಲಗಿರಿ ದೊಣ್ಣೆ ಅಮಾನತ್ತು ಪಡಿಸಿಕೊಂಡಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 10 ರವರಿಗೆ ಹಸ್ತಾಂತರ ಮಾಡಿರುತ್ತೇನೆ. ಸಾಕ್ಷಿ ನಿಪಿ 1 ಮತ್ತು 2 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ 1(ಬಿ) ಮತ್ತು 2(ಸಿ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 7 ಎಂದು ಸಹಿಯನ್ನು ನಿಪಿ 7(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನ್ಯಾಯಾಲಯದ ಮುಂದಿರುವ ಎಂ ಒ 1 ಅನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ**

ನಾನು ಪಿರ್ಯಾದುದಾರರ ಸುಳ್ಳು ದೂರು ಸ್ವೀಕರಿಸಿ ಸುಳ್ಳು ಪ್ರಕರಣ ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ದೂರನ್ನು ಪರಿಶೀಲಿಸದೆ ಚಾಸಾ 1 ರವರ ಮಾತು ಕೇಳಿ ಸುಳ್ಳು ಪ್ರಕರಣ ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ನಿಪಿ 2 ಪಂಚನಾಮೆಯನ್ನು ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ಎಂ ಒ 1 ಪ್ರಕರಣಕ್ಕಾಗಿ ಸೃಷ್ಟಿ ಮಾಡಿದ್ದೇವೆ ಎಂದರೆ ಸರಿಯಲ್ಲ. ಎಂ ಒ 1 ರೀತಿಯ ದೊಣ್ಣೆ ಎಲ್ಲಾ ಕಡೆ ಸಿಗುತ್ತದೆ ಎಂದರೆ ಸರಿ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದೆ ಇದ್ದರೂ ಸಹ ಅವರ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದ ಮುಖಾಂತರ ಬೆರಳಚ್ಚು ಮಾಡಿಸಿ ಸಾಕ್ಷಿದಾರನಿಗೆ ಓದಿ ಹೇಳಲಾಯಿತು)**

ಓ.ಹೇ.ಕೇ. ಸರಿ ಇದೆ.

Sd/-
**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ**
**ಪ್ರ.ದ.ನ್ಯಾಯಿಕ.ದಂಡಾಧಿಕಾರಿಗಳು, ಆನೇಕಲ್.**